**All India Radio: Bangalore**
**Regional Bulletin In Kannada**
**11.01.2025 / 2.30 p.m.**
**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**11.01.2025 / 2.30 p.m.**
**<><><><>**

ಮುಖ್ಯಾಂಶಗಳು

1. ಬೆಂಗಳೂರಿನಲ್ಲಿಂದು ಎಲ್ಲ ರಾಜ್ಯಗಳ ಲೋಕಸೇವಾ ಆಯೋಗಗಳ ೨೫ನೇ ರಾಷ್ಟ್ರೀಯ ಸಮ್ಮೇಳನ ಉದ್ಘಾಟಿಸಿದ ಉಪರಾಷ್ಟ್ರಪತಿ ಜಗದೀಪ್ ಧನ್‌ಕರ್
2. ಶರಣಾದ ೭ ಮಂದಿ ನಕ್ಸಲರ ಶಸ್ತ್ರಾಸ್ತ್ರ ವಶಪಡಿಸಿಕೊಂಡ ಚಿಕ್ಕಮಗಳೂರು ಪೋಲಿಸರು
3. ಏಳನೇ ಆವೃತ್ತಿಯ ಮಂಗಳೂರು ಲಿಟ್ ಫೆಸ್ಟ್‌ಗೆ ಸಾಹಿತಿ ಡಾ. ಎಸ್.ಎಲ್. ಬೈರಪ್ಪ ಚಾಲನೆ
4. ವಂದೇ ಭಾರತ್ ಎಕ್ಸ್‌ಪ್ರೆಸ್ ರೈಲು ಸಂಚಾರವನ್ನು ಬೆಳಗಾವಿವರೆಗೆ ವಿಸ್ತರಿಸುವಂತೆ ಪ್ರಧಾನಿಗೆ ಸಂಸದ ಜಗದೀಶ್ ಶೆಟ್ಟರ್ ಮನವಿ

<><><><>

ಬೆಂಗಳೂರಿನಲ್ಲಿಂದು ಎಲ್ಲಾ ರಾಜ್ಯಗಳ ಲೋಕಸೇವಾ ಆಯೋಗಗಳ ೨೫ನೇ ರಾಷ್ಟ್ರೀಯ ಸಮ್ಮೇಳನವನ್ನು ಉಪರಾಷ್ಟ್ರಪತಿ ಜಗದೀಪ್ ಧನ್‌ಕರ್ ಉದ್ಘಾಟಿಸಿದರು. ಈ ವೇಳೆ ಸಮ್ಮೇಳನವನ್ನು ಉದ್ದೇಶಿಸಿ ಮಾತನಾಡಿದ ಅವರು, ಸಾರ್ವಜನಿಕ ಸೇವಕರು ಆಡಳಿತದ ಬೆನ್ನೆಲುಬಾಗಿ, ರಾಜಕೀಯ ದೃಷ್ಟಿಕೋನವನ್ನು ನೆಲದ ವಾಸ್ತವಕ್ಕೆ ಪರಿವರ್ತಿಸುವ ಕಾರ್ಯಕಾರಿ ಸ್ತಂಭಗಳಾಗಿದ್ದಾರೆ ಎಂದು ಅಭಿಪ್ರಾಯಪಟ್ಟರು. ೨೦೪೭ ರ ವೇಳೆ ವಿಕಸಿತ ಭಾರತ ದೃಷ್ಟಿಕೋನವನ್ನು ಸಾಧಿಸಲು ನಮಗೆ ಪಾರದರ್ಶಕ ಮತ್ತು ತಾಂತ್ರಿಕವಾಗಿ ಸುಸಜ್ಜಿತ ಅಧಿಕಾರಶಾಹಿ ಅಗತ್ಯವಿದೆ. ಸಾರ್ವಜನಿಕ ಸೇವಾ ಆಯೋಗಗಳು, ಸಾರ್ವಜನಿಕ ಸೇವೆಗಾಗಿ ಅತ್ಯುತ್ತಮ ಮಾನವ ಸಂಪನ್ಮೂಲಗಳನ್ನು ಆಯ್ಕೆ ಮಾಡುವಲ್ಲಿ ಪ್ರಮುಖ ಪಾತ್ರವಹಿಸುತ್ತವೆ ಎಂದು ಹೇಳಿದರು.

**ಧ್ವನಿ : ಮುಖ್ಯಮಂತ್ರಿ ಸಿದ್ದರಾಮಯ್ಯ (೨೭ ಸೆಕೆಂಡ್ಸ್)**

ಸಾರ್ವಜನಿಕ ನೇಮಕಾತಿಗಳು ನ್ಯಾಯಯುತವಾಗಿರುವುದನ್ನು ಖಚಿತಪಡಿಸಿಕೊಳ್ಳಲು, ವಿಶೇಷವಾಗಿ ಪರೀಕ್ಷೆಗಳು ಮತ್ತು ಸಂದರ್ಶನಗಳನ್ನು ನಡೆಸುವಲ್ಲಿ ಪಾರದರ್ಶಕತೆ ಮತ್ತು

ಸಾರ್ವಜನಿಕ ಹೊಣೆಗಾರಿಕೆಯ ಅಂಶವನ್ನು ಹೆಚ್ಚಿಸುವುದು ನಿರ್ಣಾಯಕವಾಗಿದೆ ಎಂದು ಉಪರಾಷ್ಟ್ರಪತಿ ಜಗದೀಪ್ ಧನ್‌ಕರ್ ಒತ್ತಿ ಹೇಳಿದರು. ಇದೇ ವೇಳೆ ಮುಖ್ಯಮಂತ್ರಿ ಸಿದ್ದರಾಮಯ್ಯ ಮಾತನಾಡಿ, ಲೋಕ ಸೇವಾ ಆಯೋಗಗಳು ಅರ್ಹತೆ ಮತ್ತು ನ್ಯಾಯಪರತೆಯನ್ನು ಎತ್ತಿಹಿಡಿದು, ಕಾರ್ಯಾಂಗಕ್ಕೆ ಅಭೂತಪೂರ್ವ ಕೊಡುಗೆಯನ್ನು ನೀಡುವ ಪ್ರಜಾಪ್ರಭುತ್ವದ ಸ್ತಂಭಗಳಾಗಿವೆ ಎಂದು ಹೇಳಿದರು. ಸಾರ್ವಜನಿಕ ಸೇವೆಯಲ್ಲಿ ಕರ್ನಾಟಕಕ್ಕೆ ಶ್ರೀಮಂತ ಐತಿಹ್ಯವಿದೆ. ನ್ಯಾಯಯುತ ಹಾಗೂ ಪಾರದರ್ಶಕತೆಯನ್ನು ಪ್ರೋತ್ಸಾಹಿಸಲು ರಾಜ್ಯದಲ್ಲಿ ನೇಮಕಾತಿ ಮಾದರಿಗಳನ್ನು ಸರಳೀಕೃತಗೊಳಿಸಲಾಗಿದೆ ಎಂದು ತಿಳಿಸಿದರು.

**ಧ್ವನಿ : ಉಪರಾಷ್ಟ್ರಪತಿ ಜಗದೀಪ್ ಧನ್ ಕರ್ (೪೦ ಸೆಕೆಂಡ್ಸ್)**

ನಂತರ ಉಪರಾಷ್ಟ್ರಪತಿ ಜಗದೀಪ್ ಧನ್‌ಕರ್ ಅವರು, ಬಿಇಎಲ್‌ನಲ್ಲಿ ಸಂಶೋಧನೆ ಮತ್ತು ಅಭಿವೃದ್ಧಿ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಪಾಲ್ಗೊಳ್ಳಲಿದ್ದಾರೆ. ಬಳಿಕ ಬಿಎಚ್‌ಇಎಲ್‌ಗೆ ಭೇಟಿ ನೀಡಿ, ವಿಜ್ಞಾನಿಗಳು ಹಾಗೂ ಸಿಬ್ಬಂದಿಯೊಂದಿಗೆ ಸಂವಾದ ನಡೆಸಲಿದ್ದಾರೆ.

<><><><>

ರಾಜ್ಯ ಸರ್ಕಾರದ ಮುಂದೆ ಶರಣಾಗಿರುವ ೬ ಜನ ನಕ್ಸಲರ ಶಸ್ತ್ರಾಸ್ತ್ರಗಳು ಹಾಗೂ ಮದ್ದು-ಗುಂಡುಗಳನ್ನು ಚಿಕ್ಕಮಗಳೂರು ಪೊಲೀಸರು ವಶಪಡಿಸಿಕೊಂಡಿದ್ದಾರೆ. ಶರಣಾಗತಿಯಾದ ನಕ್ಸಲರು ನೀಡಿದ ಮಾಹಿತಿ ಮೇರೆಗೆ ಚಿಕ್ಕಮಗಳೂರು ಜಿಲ್ಲೆಯ ಕೊಪ್ಪ ತಾಲೂಕಿನ ಕಿತ್ತಲೆಗುಳಿ ಅರಣ್ಯ ಪ್ರದೇಶದಲ್ಲಿ ಶಸ್ತ್ರಾಸ್ತ್ರಗಳನ್ನು ವಶಕ್ಕೆ ಪಡೆಯಲಾಗಿದೆ. ಈ ಕುರಿತು ಮಾಹಿತಿ ನೀಡಿದ ಚಿಕ್ಕಮಗಳೂರು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ವಿಕ್ರಂ ಅಮಾಟೆ, ನಕ್ಸಲರಿಗೆ ಸೇರಿದ ಎ.ಕೆ.೫೬ ರೈಫಲ್, ದೇಸಿ ನಿರ್ಮಿತ ಪಿಸ್ತೂಲ್ ಸೇರಿ ಒಟ್ಟು ೬ ಶಸ್ತ್ರಾಸ್ತ್ರಗಳನ್ನು ಹಾಗೂ ೧೭೬ ಮದ್ದು-ಗುಂಡುಗಳನ್ನು ವಶಕ್ಕೆ ಪಡೆಯಲಾಗಿದೆ ಎಂದು ತಿಳಿಸಿದ್ದಾರೆ. ಈ ಸಂಬಂಧ ಜಯಪುರ ಪೊಲೀಸ್ ಠಾಣೆಯಲ್ಲಿ ಪ್ರಕರಣ ಕೂಡ ದಾಖಲಿಸಲಾಗಿದೆ.

<><><><>

ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಕೇಂದ್ರ ಸರ್ಕಾರ ರಾಜ್ಯಗಳಿಗೆ ತೆರಿಗೆ ಪಾಲನ್ನು ಹಂಚಿಕೆ ಮಾಡಿದೆ. ೨೮ ರಾಜ್ಯಗಳಿಗೆ ಒಟ್ಟಾರೆ ೧ ಲಕ್ಷದ ೭೩ ಸಾವಿರದ ೩೦ ಕೋಟಿ ರೂಪಾಯಿ ತೆರಿಗೆಯನ್ನು ಹಂಚಿದೆ. ಈ ಪೈಕಿ ಕರ್ನಾಟಕಕ್ಕೆ ತೆರಿಗೆ ಪಾಲಿನ ಕಂತು ೬ ಸಾವಿರದ ೩೧೦ ಕೋಟಿ ರೂಪಾಯಿಗಳನ್ನು ಹಂಚಿಕೆ ಮಾಡಲಾಗಿದೆ. ವಿವಿಧ ಅಭಿವೃದ್ಧಿ ಕಾರ್ಯಗಳು ಹಾಗೂ

ಜನಪರ ಯೋಜನೆಗಳಿಗಾಗಿ ಹಣಕಾಸು ಆಯೋಗದ ಶಿಫಾರಸ್ಸಿನಂತೆ ತೆರಿಗೆ ಪಾಲನ್ನು ಹಂಚಿಕೆ ಮಾಡಲಾಗಿದೆ.

<><><>

ಭಾರತ್ ಫೌಂಡೇಶನ್ ವತಿಯಿಂದ ಮಂಗಳೂರಿನಲ್ಲಿ ನಡೆಯುತ್ತಿರುವ ಎರಡು ದಿನಗಳ ಏಳನೇ ಆವೃತ್ತಿಯ ಲಿಟ್ ಫೆಸ್ಟ್‌ಗೆ ಸಾಹಿತಿ ಡಾ.ಎಸ್.ಎಲ್.ಭೈರಪ್ಪ ಇಂದು ಚಾಲನೆ ನೀಡಿದರು. ಬಳಿಕ ಮಾತನಾಡಿದ ಅವರು, ಸಾಹಿತ್ಯ ಉತ್ಸವವು ಹೊಸ ಸಾಹಿತ್ಯಲೋಕದ ಹೊಸ ತಿರುವುಗಳಿಗೆ ಪ್ರೇರಣೆಯಾಗಬೇಕು. ಹೊಸ ಚಿಂತನೆಗೆ ಹಚ್ಚುವಂತಾಗಬೇಕು. ಯುವ ಜನಾಂಗವು ಸಾಹಿತ್ಯ ಕ್ಷೇತ್ರದತ್ತ ಒಲವು ಹರಿಸಬೇಕು ಎಂದು ಹೇಳಿದರು. ಎರಡು ದಿನಗಳ ಸಾಹಿತ್ಯ ಉತ್ಸವದಲ್ಲಿ ೬೦ಕ್ಕೂ ಅಧಿಕ ಭಾಷಾ ತಜ್ಞರು, ಹಿರಿಯ ಸಾಹಿತಿಗಳು, ಉದಯೋನ್ಮುಖ ಬರಹಗಾರರು, ಲೇಖಕರು, ಯುವ ಕವಿಗಳು, ವಾಗ್ಮಿಗಳು ಪಾಲ್ಗೊಳ್ಳಲಿದ್ದಾರೆ.

<><><>

ಬೆಳಗಾವಿ ಸಂಸದ ಜಗದೀಶ ಶೆಟ್ಟರ್ ಅವರು ಪ್ರಧಾನಿ ನರೇಂದ್ರ ಮೋದಿ ಅವರನ್ನು ಭೇಟಿಯಾಗಿ, ಬೆಳಗಾವಿ ಜಿಲ್ಲೆ ರಾಮದುರ್ಗದಲ್ಲಿರುವ ಐತಿಹಾಸಿಕ ಶಬರಿ ಕೊಳ್ಳ ಅಭಿವೃದ್ಧಿಪಡಿಸುವಂತೆ ಮನವಿ ಮಾಡಿದ್ದಾರೆ. ಇದೇ ವೇಳೆ ಅವರು, ಬೆಂಗಳೂರು-ಧಾರವಾಡದ ಮಧ್ಯ ಸಂಚರಿಸುತ್ತಿರುವ 'ವಂದೇ ಭಾರತ್' ಎಕ್ಸ್‌ಪ್ರೆಸ್ ರೈಲು ಸಂಚಾರವನ್ನು ಬೆಳಗಾವಿಯವರೆಗೆ ವಿಸ್ತರಿಸುವಂತೆ ಕೋರಿದ್ದಾರೆ. ವಿಮಾನಯಾನ ಸೇವೆಗೆ ಸಂಬಂಧಿಸಿದಂತೆ "ಉಡಾನ್ ೩.೦" ಯೋಜನೆಯ ಅವಧಿಯನ್ನು ಇನ್ನೂ ಹೆಚ್ಚಿಸಿದಲ್ಲಿ ಪ್ರಯಾಣಿಕರಿಗೆ ಅನುಕೂಲವಾಗಲಿದೆ. ಅಲ್ಲದೇ ಬೆಳಗಾವಿ ನಗರ ಸೇರಿದಂತೆ ಇತರೆ ನಗರಗಳಲ್ಲಿ ವಿಮಾನಯಾನ ಸೇವೆಯ ಬೆಳವಣಿಗೆಗೆ ಪೂರಕವಾಗಲಿದೆ ಎಂದು ಪ್ರಧಾನಿಯವರಿಗೆ ಸಂಸದ ಜಗದೀಶ್ ಶೆಟ್ಟರ್ ಮನವಿ ಮಾಡಿದ್ದಾರೆ.

<><><>

ತಮಗೆ ಯಾರ ಬೆಂಬಲವೂ ಬೇಡ. ಪಕ್ಷ ಹೇಳಿದಂತೆ ಕೆಲಸ ಮಾಡುತ್ತೇನೆ ಎಂದು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಸ್ಪಷ್ಟಪಡಿಸಿದ್ದಾರೆ. ಶೃಂಗೇರಿಯಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ತಾವು ಧರ್ಮದ ಮೇಲೆ ನಂಬಿಕೆ ಇಟ್ಟುಕೊಂಡಿರುವವರು. ನಿತ್ಯ ಪೂಜೆ ಮಾಡುತ್ತೇನೆ. ತಮ್ಮ ಒಳಿತು, ರಾಜ್ಯದ ಒಳಿತು ಹಾಗೂ ಸಮಾಜದ ಒಳಿತಿಗಾಗಿ ಪ್ರಾರ್ಥಿಸುತ್ತೇನೆ. ಹೀಗಾಗಿ ದೇವಾಲಯಗಳಿಗೆ ಭೇಟಿ ನೀಡುತ್ತಿದ್ದೇನೆ ಎಂದರು. ಶ್ರೀ ಭಾರತಿ ತೀರ್ಥ ಮಹಾಸ್ವಾಮಿಗಳು ಮಠದ ಜವಾಬ್ದಾರಿ ಸ್ವೀಕರಿಸಿ, ೫೦ ವರ್ಷಗಳು ಪೂರ್ಣಗೊಂಡಿವೆ. ಅವರು ರಾಜಕಾರಣದಲ್ಲಿ ಎಂದೂ ಹಸ್ತಕ್ಷೇಪ ಮಾಡದೆ, ಕೇವಲ ಧರ್ಮ,

ಸಂಸ್ಕೃತಿ, ಸಂಸ್ಕಾರ ರಕ್ಷಣೆ ಮಾಡಿಕೊಂಡು ಬಂದಿದ್ದಾರೆ. ಆ ಮೂಲಕ ತಮ್ಮ ಕರ್ತವ್ಯ ನಿಭಾಯಿಸುತ್ತಿದ್ದಾರೆ ಎಂದು ಡಿ.ಕೆ. ಶಿವಕುಮಾರ್ ಹೇಳಿದ್ದಾರೆ.

<><><>

ಬೆಂಗಳೂರಿನ ಹೆಬ್ಬಾಳದಿಂದ ಸಿಲ್ಕ್ ಬೋರ್ಡ್‌ವರೆಗಿನ ಉದ್ದೇಶಿತ ೧೮ ಕಿಲೋ ಮೀಟರ್ ಉದ್ದದ ಸುರಂಗ ರಸ್ತೆ ನಿರ್ಮಾಣ ಯೋಜನೆಯನ್ನು ಮರು ಪರಿಶೀಲಿಸುವಂತೆ ಸಂಸದ ಪಿ.ಸಿ.ಮೋಹನ್, ಬಿಬಿಎಂಪಿ ಮುಖ್ಯ ಆಯುಕ್ತರಿಗೆ ಪತ್ರ ಬರೆದಿದ್ದಾರೆ. ಸುರಂಗ ನಿರ್ಮಾಣ ಯೋಜನೆಯು ನಗರದ ಸಂಚಾರ ದಟ್ಟಣೆ ಮತ್ತು ಪರಿಸರ ಸಮಸ್ಯೆ ಪರಿಹರಿಸುವ ಬದಲಿಗೆ ಮತ್ತಷ್ಟು ಹದಗೆಡಿಸಲಿದೆ. ಸುರಂಗ ರಸ್ತೆಗೆ ಸಂಬಂಧಿಸಿದಂತೆ ಸಮಗ್ರ ಡಿಪಿಆರ್ ಸಿದ್ಧಪಡಿಸಲು ೧೨ ರಿಂದ ೧೮ ತಿಂಗಳು ಬೇಕಾಗುತ್ತದೆ. ಆದರೆ, ಕೇವಲ ೩ ತಿಂಗಳಲ್ಲಿ ತಯಾರಿಸಿದ್ದು, ಇದು ಅವಾಸ್ತವಿಕವಾಗಿದೆ. ಭೂತಾಂತ್ರಿಕ ಅಧ್ಯಯನವನ್ನೂ ಒಳಗೊಂಡಿಲ್ಲ ಎಂದು ಆಕ್ಷೇಪ ವ್ಯಕ್ತಪಡಿಸಿದ್ದಾರೆ. ಸುರಂಗವು ೩೦ ಮೀಟರ್ ಆಳದಲ್ಲಿ ಹಾದು ಹೋಗಲಿದ್ದು, ಪ್ರತಿ ಕಿಲೋ ಮೀಟರ್‌ಗೆ ೨೦ ಕಡೆ ಮಣ್ಣಿನ ಮಾದರಿಗಳನ್ನು ಸಂಗ್ರಹಿಸಬೇಕು. ೧೮ ಕಿಲೋ ಮೀಟರ್ ಮಾರ್ಗದಲ್ಲಿ ಕನಿಷ್ಠ ೪೦೦ ಕಡೆ ಮಣ್ಣಿನ ಮಾದರಿ ಸಂಗ್ರಹಿಸಿ ಪರೀಕ್ಷಿಸಬೇಕು. ಆದರೆ, ಇದ್ಯಾವುದನ್ನೂ ಮಾಡಿಲ್ಲ. ಹೀಗಾಗಿ, ಯೋಜನೆಯ ಸುರಕ್ಷತೆ ಮತ್ತು ಕಾರ್ಯಸಾಧ್ಯತೆಗೆ ಧಕ್ಕೆ ತರಲಿದೆ ಎಂದು ಸಂಸದ ಪಿ.ಸಿ.ಮೋಹನ್ ಆತಂಕ ವ್ಯಕ್ತಪಡಿಸಿದ್ದಾರೆ.

<><><>

ಕೊಪ್ಪಳ ಜಿಲ್ಲೆಯ ನಾಗರಿಕರ ವೇದಿಕೆ, ಇಟಗಿ ಉತ್ಸವ ಸಮಿತಿಯಿಂದ ಆಯೋಜಿಸಲಾಗಿರುವ ಇಟಗಿಯ ಸಾಂಸ್ಕೃತಿಕ ಹಾಗೂ ಧಾರ್ಮಿಕ ಉತ್ಸವ-೨೦೨೫ಕ್ಕೆ ಅನಿವಾಸಿ ಭಾರತೀಯ ಲೀಲಾಧರ ಬೈಕಂಪಾಡಿ ಚಾಲನೆ ನೀಡಿದರು. ನಂತರ ಆಕಾಶವಾಣಿಯೊಂದಿಗೆ ಮಾತನಾಡಿದ ಅವರು, ಉತ್ಸವ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮಗಳು ನಮ್ಮ ಪರಂಪರೆ ಹಾಗೂ ಇತಿಹಾಸವನ್ನು ಪ್ರಪಂಚಕ್ಕೆ ತಿಳಿಸುತ್ತವೆ ಎಂದು ಹೇಳಿದರು.

**ಬೈಟ್:- ಲೀಲಾಧರ ಬೈಕಂಪಾಡಿ**

ಇಟಗಿ ಗ್ರಾಮದಲ್ಲಿನ ಮಹಾದೇವ ದೇವಾಲಯವು, 'ದೇವಾಲಯಗಳ ಚಕ್ರವರ್ತಿ' ಎಂದು ಬಿರುದು ಪಡೆದಿದೆ. ಯುನೆಸ್ಕೋ ಪಟ್ಟಿಗೆ ಈ ದೇವಸ್ಥಾನ ಸೇರ್ಪಡೆಯಾಗಬೇಕು ಎಂದು ಕಲಬುರ್ಗಿ ವಿಶ್ವವಿದ್ಯಾಲಯದ ನಿವೃತ್ತ ಪ್ರಾಧ್ಯಾಪಕ ಎ.ಎಸ್.ಪಾಟೀಲ ಆಶಯ ವ್ಯಕ್ತಪಡಿಸಿದರು.

<><><>

ಇದೇ ೨೬ ರಂದು ದಾವಣಗೆರೆ ಜಿಲ್ಲಾಡಳಿತದಿಂದ ೭೬ನೇ ಗಣರಾಜ್ಯೋತ್ಸವ ಆಚರಣೆಗೆ ಅಗತ್ಯ ಸಿದ್ಧತೆಗಳನ್ನು ಮಾಡಿಕೊಳ್ಳಲಾಗಿದ್ದು, ಎಲ್ಲ ಅಧಿಕಾರಿ, ಸಿಬ್ಬಂದಿ ಕಡ್ಡಾಯವಾಗಿ ಭಾಗವಹಿಸಬೇಕೆಂದು ಜಿಲ್ಲಾಧಿಕಾರಿ ಡಾ.ಗಂಗಾಧರ ಸ್ವಾಮಿ ಸೂಚಿಸಿದ್ದಾರೆ. ಗಣರಾಜ್ಯೋತ್ಸವ ಆಚರಣೆ ಕುರಿತ ಪೂರ್ವಸಿದ್ಧತಾ ಸಭೆಯಲ್ಲಿ ಅವರು ಮಾತಾನಾಡಿದರು.

<><><><>

ಜೋಯಿಡಾ ತಾಲೂಕಿನ ಎಲ್ಲ ಗ್ರಾಮ ಪಂಚಾಯತಿಗಳಲ್ಲಿ ಬಾಕಿ ಇರುವ ಸಾಮಾಜಿಕ ಪರಿಶೋಧನೆಯ ಪ್ರಕರಣಗಳನ್ನು ಶೀಘ್ರದಲ್ಲಿ ಬಗೆಹರಿಸುವಂತೆ ಉತ್ತರಕನ್ನಡ ಜಿಲ್ಲಾ ಪಂಚಾಯತಿ ಯೋಜನಾ ನಿರ್ದೇಶಕ ಕರೀಂ ಅಸದಿ ಅಧಿಕಾರಿಗಳಿಗೆ ಸೂಚಿಸಿದ್ದಾರೆ. ನಗರದ ಜೋಯಿಡಾ ತಾಲೂಕು ಪಂಚಾಯತಿ ಸಭಾಭವನದಲ್ಲಿ ನಡೆದ ನರೇಗಾ ಹಾಗೂ ಎನ್.ಆರ್.ಎಲ್.ಎಂ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>